# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021–22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಮೊರಾರ್ಜಿದೇಸಾಯಿ ವಸತಿ ಶಾಲೆ/ಮಾದರಿ ಶಾಲೆ/ಕಾಲೇಜುಗಳಲ್ಲಿ "ತಂತ್ರಜ್ಞಾನ ಆಧಾರಿತ ಕಲಿಕಾ ಕಾರ್ಯಕ್ರಮ" ಅನುಷ್ಠಾನಗೊಳಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 225 ಎಂಡಿಎಸ್ 2021, ದಿನಾಂಕ: 06-07-2021
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಪತ್ರ ಸಂಖ್ಯೆ:ಅಸಂನಿ/ಟಿಎಎಸ್‌ಪಿ/ಸಿಆರ್-01/2021-22,ದಿನಾಂಕ:13-07-2021.

*~*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಮೊರಾರ್ಜಿದೇಸಾಯಿ ವಸತಿ ಶಾಲೆ/ ಕಾಲೇಜುಗಳಲ್ಲಿ **ತಂತ್ರಜ್ಞಾನ ಆಧಾರಿತ ಕಲಿಕಾ ಕಾರ್ಯಕ್ರಮವನ್ನು** ಪ್ರಾಯೋಗಿಕವಾಗಿ (Pilot Basis) ಪ್ರತಿ ಜಿಲ್ಲೆಗೆ ಒಂದರಂತೆ ರಾಜ್ಯದ 31 ಜಿಲ್ಲೆಗಳಲ್ಲಿ ಪ್ರತಿ ಶಾಲೆಗೆ ರೂ.24.76ಲಕ್ಷ (ಇಪ್ಪತ್ತಾಲ್ಕು ಲಕ್ಷದ ಎಪ್ಪತ್ತಾರು ಸಾವಿರ ರೂಪಾಯಿಗಳು ಮಾತ್ರ)ಗಳಂತೆ **(31 ಶಾಲೆಗಳು x ರೂ.24.76ಲಕ್ಷ = ರೂ.7.67ಕೋಟಿ (ಏಳು ಕೋಟಿ ಅರವತ್ತೇಳು ಲಕ್ಷ ರೂಪಾಯಿಗಳು ಮಾತ್ರ)** ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಮಂಜೂರಾತಿ ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜುಗಳಲ್ಲಿ ತಂತ್ರಜ್ಞಾನ ಆಧಾರಿತ ಕಲಿಕಾ ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ (Pilot Basis) ಪ್ರತಿ ಜಿಲ್ಲೆಗೆ ಒಂದರಂತೆ ರಾಜ್ಯದ 31 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಅರ್ಹ ಸರಬರಾಜುದಾರರಿಂದ ಇ-ಪ್ರಕ್ಯೂರ್‌ಮೆಂಟ್ ಮೂಲಕ ವಿಭಾಗವಾರು ಅಲ್ಪಾವಧಿ ಇ-ಟೆಂಡರ್ ಕರೆಯಲು ಅನುಮತಿಯೊಂದಿಗೆ ಈ ಕೆಳಕಂಡಂತೆ ಪ್ರಾಧಿಕಾರವನ್ನು ರಚಿಸಿ, ಸರ್ಕಾರಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ.ಸಂ | ಅಧಿಕಾರಿಗಳ ಪದನಾಮ | ಪ್ರಾಧಿಕಾರ |
|---|---|---|
| 1 | ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು | ಟೆಂಡರ್ ಅನುಮೋದಿಸುವ & ಮೇಲ್ಮನವಿ ಪ್ರಾಧಿಕಾರ |

......2.

| | | |
|---|---|---|
| 2 | ಸರ್ಕಾರದ ಉಪ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ , ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು. | ಸ್ಟೇಟ್ ಬುಲೆಟಿನ್ ಆಫಿಸರ್ |
| 3 | ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು | ಟೆಂಡರ್ ಆಹ್ವಾನಿಸುವ & ಪರಿಶೀಲಿಸುವ ಪ್ರಾಧಿಕಾರ |
| 4 | ನಿರ್ದೇಶಕರು, ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್‌ಐಸಿ), ಬೆಂಗಳೂರು | ಸದಸ್ಯರು |
| 5 | ನಿರ್ದೇಶಕರು, ಡಿ.ಎಸ್.ಇ.ಆರ್.ಟಿ. ಬೆಂಗಳೂರು | ಸದಸ್ಯರು |
| 6 | ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು | ಸದಸ್ಯರು |
| 7 | ಸಹಾಯಕ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು | ಸದಸ್ಯರು |

ಅಲ್ಪಾವಧಿ ಇ–ಟೆಂಡರ್ ರನ್ನು ವಿಭಾಗವಾರು ಕರೆಯಲು ಉದ್ದೇಶಿಸಿರುವುದರಿಂದ ಸದರಿ ನಾಲ್ಕು ವಿಭಾಗಗಳ ಒಟ್ಟು ಮೊತ್ತವು ಅಂದಾಜು ರೂ.7.67 ಕೋಟಿಗಳಾಗಿರುತ್ತದೆ. ಅಲ್ಪಾವಧಿ ಇ–ಟೆಂಡರ್‌ನ ವಿಭಾಗವಾರು ಮೊತ್ತವು ಈ ಕೆಳಗಿನಂತೆ ಇರುತ್ತದೆ.

| ಕ್ರ.ಸಂ | ವಿಭಾಗ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು | 222.28 |
| 2 | ಮೈಸೂರು | 198.08 |
| 3 | ಕಲಬುರಗಿ | 173.32 |
| 4 | ಬೆಳಗಾವಿ | 173.32 |
| **ಒಟ್ಟು ಮೊತ್ತ** | | **767.00** |

ಇದಕ್ಕೆ ತಗಲುವ ವೆಚ್ಚವನ್ನು 2021–22ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ: 2225–04–277–0–10(059) ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ, ರಾಜ್ಯವಲಯ ಯೋಜನೆಯಡಿ ಉಳಿಕೆಯಾಗುವ ಅನುದಾನದಿಂದ ಭರಿಸಲಾಗುವುದು ಎಂದು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ತಿಳಿಸಿರುತ್ತಾರೆ.

..............3

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 225 MDS 2021 ಬೆಂಗಳೂರು ದಿನಾಂಕ:28-07-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜುಗಳಲ್ಲಿ ತಂತ್ರಜ್ಞಾನ ಆಧಾರಿತ ಕಲಿಕಾ ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ (Pilot Basis) ಪ್ರತಿ ಜಿಲ್ಲೆಗೆ ಒಂದರಂತೆ ರಾಜ್ಯದ 31 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಅರ್ಹ ಸರಬರಾಜುದಾರರಿಂದ ಇ-ಪ್ರಕ್ಯೂರ್‌ಮೆಂಟ್ ಮೂಲಕ ವಿಭಾಗವಾರು ಅಲ್ಪಾವಧಿ ಇ-ಟೆಂಡರ್ ಕರೆಯಲು ಸರ್ಕಾರದ ಅನುಮತಿ ನೀಡಲಾಗಿದೆ. ಹಾಗೂ ಈ ಕೆಳಕಂಡಂತೆ ಟೆಂಡರ್ ಪ್ರಾಧಿಕಾರವನ್ನು ರಚಿಸಿ ಆದೇಶಿಸಿದೆ.

| ಕ್ರ.ಸಂ | ಅಧಿಕಾರಿಗಳ ಪದನಾಮ | ಪ್ರಾಧಿಕಾರ |
|---|---|---|
| 1 | ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು | ಟೆಂಡರ್ ಅನುಮೋದಿಸುವ & ಮೇಲ್ಮನವಿ ಪ್ರಾಧಿಕಾರ |
| 2 | ಸರ್ಕಾರದ ಉಪ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ , ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು. | ಸ್ಟೇಟ್ ಬುಲೆಟಿನ್ ಆಫಿಸರ್ |
| 3 | ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು | ಟೆಂಡರ್ ಆಹ್ವಾನಿಸುವ ಪ್ರಾಧಿಕಾರ |
| 4 | **ಟೆಂಡರ್ ಪರಿಶೀಲಿಸುವ ಪ್ರಾಧಿಕಾರ**<br>1. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ<br>2. ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ<br>3. ಸಹಾಯಕ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ<br>4. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ವಿದ್ಯುನ್ಮಾನ (ಇ-ಆಡಳಿತ), ಬೆಂಗಳೂರು, ಇವರಿಂದ ನಾಮನಿರ್ದೇಶಿತರು.<br>5. Nominee of NGO-CITAG, who is working with BBMP, Bengaluru. | ಸದಸ್ಯರು<br>ಸದಸ್ಯರು |